ಮೈಸೂರು – ಬೆಂಗಳೂರು ಷಟ್ಪಥ ಕಾಮಗಾರಿ ವಿಳಂಬ

525 (653) ಶ್ರೀ ಎಂ.ಕೃಷ್ಣಪ್ಪ (ವಿಜಯನಗರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಮೈಸೂರು ಷಟ್ಪಥ ರಸ್ತೆ ಕಾಮಗಾರಿಗೆ ಗುದ್ದಲಿ ಪೂಜೆಯನ್ನು ನೆರವೇರಿಸಲಾಗಿರುವುದೇ;

ಆ) ಹಾಗಿದ್ದಲ್ಲಿ, ಈ ಕಾಮಗಾರಿ ಇನ್ನೂ ಪ್ರಾರಂಭಗೊಂಡಿಲ್ಲದಿರಲು ಕಾರಣವೇನು;

ಇ) ಎಂದು ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಗುದ್ದಲಿ ಪೂಜೆ ನೆರವೇರಿಸಿರುವುದಿಲ್ಲ.

ಆ) ಷಟ್ಪಥ ರಸ್ತೆಯನ್ನು ಪಿಪಿಪಿ ಯೋಜನೆಯಡಿಯಲ್ಲಿ ಕೈಗೆತ್ತಿಕೊಳ್ಳಲು ಯೋಜಿಸಲಾಗಿತ್ತು. ಆದರೆ ಬೆಂಗಳೂರಿನಿಂದ – ಮದ್ದೂರುವರೆಗೆ ನಾಲ್ಕು ಪಥದ ರಸ್ತೆಯ ನಿರ್ಮಾಣವನ್ನು ಅನ್ಯೂಟಿ ಗುತ್ತಿಗೆ ಆಧಾರದ ಮೇಲೆ ವಹಿಸಲಾಗಿದ್ದು, ನಿರ್ವಹಣಾ ಅವಧಿಯ ದಿನಾಂಕ: 30–06–2014ರವರೆಗೆ ಇರುತ್ತದೆ. ಆದುದರಿಂದ ಷಟ್ಪಥ ರಸ್ತೆಯ ನಿರ್ಮಾಣ ಕಾಮಗಾರಿಯನ್ನು ಸದ್ಯಕ್ಕೆ ತೆಗೆದುಕೊಳ್ಳುತ್ತಿಲ್ಲ.

ಇ) ಅನ್ವಯಿಸುವುದಿಲ್ಲ.

ಮರು ಸರ್ವೆ ಮಾಡಿದ ಪಡಿತರ ಚೀಟಿ ನೀಡುವುದು

526 (663) ಶ್ರೀ ಎಂ.ಟಿ.ಕೃಷ್ಣಪ್ಪ (ತುರುವೇಕೆರೆ) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕಿನಾದ್ಯಂತ 1900 ಬಿಪಿಎಲ್ ಅರ್ಹ ಪಡಿತರ ಚೀಟಿಗಳನ್ನು ಅನರ್ಹ ಎಂದು ತೆಗೆದು ಹಾಕಿರುವುದು ನಿಜವೇ;

ಆ) ಮತ್ತೆ ಮರು ಸರ್ವೇ ಮಾಡಿದಾಗ ಅದೇ 1900 ಪಡಿತರ ಚೀಟಿಗಳನ್ನು ಅರ್ಹ ಎಂದು ಪರಿಗಣಿಸಿ ಸರ್ಕಾರಕ್ಕೆ ವರದಿ ನೀಡಿರುವುದು ನಿಜವೇ;

ಇ) ಈ ವಿವೇಚನಾರಹಿತ ಕಾರ್ಯದಿಂದ ಬಿಪಿಎಲ್ ಪಡಿತರ ಚೀಟಿಗಳನ್ನು ವಿತರಿಸುವುದರಲ್ಲಿ ವಿಳಂಬವಾಗಿ ನಾಗರೀಕರಿಗೆ ಆಗುತ್ತಿರುವ ಅನಾನುಕೂಲವನ್ನು ಸರ್ಕಾರ ಗಮನಿಸಿದೆಯೇ;

ಈ) ನಿಗದಿತ ಕಾಲಮಿತಿಯಲ್ಲಿ ಅರ್ಹರಿಗೆ ಬಿಪಿಎಲ್ ಪಡಿತರ ಚೀಟಿಯನ್ನು ನೀಡುವ ಪ್ರಕ್ರಿಯೆಯನ್ನು ತ್ವರಿತಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು; (ಮಾಹಿತಿ ನೀಡುವುದು)?

ಶ್ರೀ ಹೆಚ್.ಹಾಲಪ್ಪ (ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ಹೌದು.

ಆ) ತುರುವೆಕೆರೆ ತಾಲ್ಲೂಕಿನಲ್ಲಿ 7489 ಅನರ್ಹ ಪಡಿತರ ಚೀಟಿಗಳೆಂದು ಗುರುತಿಸಲಾಗಿರುವ ಫಲಾನುಭವಿಗಳ ಪೈಕಿ ನವೆಂಬರ್-2009ರ ಮಾಹೆಯಲ್ಲಿ ಗ್ರಾಮ ಲೆಕ್ಕಾಧಿಕಾರಿಗಳಿಂದ ಮರುಪರಿಶೀಲಿಸ ಲಾಗಿದೆ. 1212 ಪ್ರಿ ನೆಮ್ಮದಿ ಅಕ್ಷಯ ಪಡಿತರ ಚೀಟಿಗಳ ಪೈಕಿ 257 ಮತ್ತು 6277 ನೆಮ್ಮದಿ ಅಕ್ಷಯ ಪಡಿತರ ಚೀಟಿಗಳ ಪೈಕಿ 1698 ಒಟ್ಟು 1955 ಅಕ್ಷಯ ಪಡಿತರ ಚೀಟಿದಾರರು ಅರ್ಹರೆಂದು ಗುರುತಿಸಲಾಗಿದೆ.

ಇ) ಹೌದು.

ಈ) ಖಾಯಂ ಗಣಕೀಕೃತ ಪಡಿತರ ಚೀಟಿ ನೀಡುವ ಕಾರ್ಯ ಪ್ರಗತಿಯಲ್ಲಿದ್ದು, ಶೀಘ್ರದಲ್ಲಿ ಮುಕ್ತಾಯಗೊಳಿಸಲಾಗುವುದು. ಬಿಟ್ಟು ಹೋಗಿರುವ ಕುಟುಂಬಗಳು ತಾಲ್ಲೂಕು ಮಟ್ಟದ ಬ್ಯಾಕ್ ಆಫೀಸುಗಳಲ್ಲಿ ಪಡಿತರ ಚೀಟಿಯ ಕುಂದು ಕೊರತೆ ಬಗ್ಗೆ ಪರಿಹಾರ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ರಾಷ್ಟ್ರೀಯ ಹೆದ್ದಾರಿ 2012 ನಾಲ್ಕು ಪಥದ ರಸ್ತೆ ನಿರ್ಮಾಣ

527 (647) ಶ್ರೀ ಮಹದೇವ ಪ್ರಸಾದ ಹೆಚ್.ಎಸ್. (ಗುಂಡ್ಲುಪೇಟೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು-ನಂಜನಗೂಡು ರಾಷ್ಟ್ರೀಯ ಹೆದ್ದಾರಿ-2012ರಲ್ಲಿ ವಾಹನ ಅಪಘಾತ ಪ್ರಕರಣಗಳು ಹೆಚ್ಚಿನ ಪ್ರಮಾಣದಲ್ಲಿ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ;